## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ಭಾರತಿ ಶೆಟ್ಟಿ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಪ್ರಶ್ನೆ:-**

ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಬಾಲಕಿಯರು, ಯುವತಿಯರು ಮತ್ತು ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಕೊಲೆ, ಹಲ್ಲೆ ಪ್ರಕರಣಗಳನ್ನು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಇದರ ಪರಿಣಾಮವಾಗಿ ಸಮಾಜದಲ್ಲಿ ನಾಗರಿಕ ಕಾನೂನುಗಳು ಸತತವಾಗಿ ಉಲ್ಲಂಘನೆಯಾಗುತ್ತಿದೆ. ಸಮಾಜದಲ್ಲಿ ಮಹಿಳೆಯರಿಗೆ ರಕ್ಷಣೆಯಿಲ್ಲದಂತಾಗಿದೆ. ಕಾರಣ ಪೊಲೀಸ್ ಇಲಾಖೆ ವಿಫಲವಾಗಿದೆ ಎಂದು ಸದರಿ ಪ್ರಕರಣಗಳು (ಉದಾಹರಣೆ ನೇಹಾ ಕೊಲೆ, ಅಂಜಲಿ ಪ್ರಕರಣ ಇತ್ಯಾದಿ) ಬೆಳಕು ಚೆಲ್ಲಿವೆ. ಈ ಕುರಿತು ರಾಜ್ಯದ ಪೊಲೀಸ್ ಇಲಾಖೆ ವಿಫಲವಾಗಿದೆಯೆಂದು ಈ ಮೂಲಕ ಸರ್ಕಾರದ ಗಮನ ಸೆಳೆಯ ಬಯಸುತ್ತೇನೆ.

*******

**ಉತ್ತರ:-**

ರಾಜ್ಯದಲ್ಲಿ ಬಾಲಕಿಯರು, ಯುವತಿಯರು ಮತ್ತು ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಕೊಲೆ, ಹಲ್ಲೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಪ್ರಕರಣಗಳನ್ನು ದಾಖಲಿಸಿಕೊಂಡು, ಕೂಡಲೇ ತನಿಖೆಯನ್ನು ಕೈಗೊಂಡು, ಕಾಲಮಿತಿಯೊಳಗೆ ತನಿಖೆಯನ್ನು ಪೂರ್ಣಗೊಳಿಸಿ, ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮಹಿಳೆಯರ ಮತ್ತು ಮಕ್ಕಳ ಮೇಲಿನ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಹಾಗೂ ಅವರ ಸುರಕ್ಷತೆಗಾಗಿ ಪೊಲೀಸ್ ಇಲಾಖೆಯಿಂದ ಮುಂಜಾಗೃತ ಹಾಗೂ ಸುಧಾರಿತ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

- ಬೆಂಗಳೂರು ನಗರದಲ್ಲಿ ಮಹಿಳೆಯರ ರಕ್ಷಣೆಗಾಗಿ, ಮಹಿಳಾ ಸಹಾಯವಾಣಿ 1091 ಮತ್ತು ವನಿತಾ ಸಹಾಯವಾಣಿ 22943225 ಕಾರ್ಯ ನಿರ್ವಹಿಸುತ್ತಿವೆ.

- ಬೆಂಗಳೂರು ನಗರದಲ್ಲಿ ದಿನದ 24 ಗಂಟೆಯೂ ಸಹ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ "ಪಿಂಕ್ ಹೊಯ್ಸಳ" ಮತ್ತು 112 ಗಸ್ತು ವಾಹನಗಳು ಗಸ್ತು ಕಾರ್ಯ ನಿರ್ವಹಿಸುತ್ತಿವೆ.

- ರಾಜ್ಯದ ಇತರೆ ಜಿಲ್ಲೆಗಳಾದ ಬಾಗಲಕೋಟೆ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಬಳ್ಳಾರಿ ಜಿಲ್ಲೆಯಲ್ಲಿ ಓಬವ್ವ ಪಡೆ, ದಾವಣಗೆರೆ ಜಿಲ್ಲೆಯಲ್ಲಿ ದುರ್ಗಾ ಪಡೆ, ಗದಗ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಶರಾವತಿ ಒಬ್ಬವ್ವ ಪಡೆ, ಬೀದರ್ ಜಿಲ್ಲೆಯಲ್ಲಿ ರಾಣಿ ಚನ್ನಮ್ಮ ಪಡೆಗಳನ್ನು ಸ್ಥಾಪಿಸಲಾಗಿದ್ದು, ಸದರಿ ಪಡೆಗಳ ವಾಹನಗಳು ಹೆಚ್ಚಾಗಿ ಮಹಿಳೆಯರು ಓಡಾಡುವ ಜನನಿಬೀಡ ಸ್ಥಳಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಬಳಿ ಹೆಚ್ಚಿನ ಗಸ್ತು ಕಾರ್ಯವನ್ನು ನಿರ್ವಹಿಸುತ್ತಿರುತ್ತದೆ.

* ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಬೆಂಗಳೂರು ನಗರದಲ್ಲಿ "ವೀರವನಿತೆ" ತಂಡವನ್ನು ರಚಿಸಿ, ಸದರಿ ತಂಡದ ಅಧಿಕಾರಿ/ಸಿಬ್ಬಂದಿಗಳಿಗೆ ತಜ್ಞರಿಂದ ಸ್ವಯಂ ರಕ್ಷಣೆ ಮತ್ತು ಮಾರ್ಷಿಯಲ್ ಆರ್ಟ್ಸ್ ಬಗ್ಗೆ 6 ತಿಂಗಳ ಅವಧಿಯ ತರಬೇತಿ ನೀಡಲಾಗುತ್ತಿದೆ. ನಂತರ ಸದರಿಯವರುಗಳನ್ನು 3 ತಂಡಗಳನ್ನಾಗಿ ರಚಿಸಿ ಮೇಲಾಧಿಕಾರಿಗಳ ನೇತೃತ್ವದಲ್ಲಿ ನಗರದ ವಿವಿಧ ಶಾಲಾ-ಕಾಲೇಜುಗಳು ಮತ್ತು ಮಹಿಳೆಯರು ಹೆಚ್ಚಾಗಿ ಕೆಲಸ ನಿರ್ವಹಿಸುವ ಗಾರ್ಮೆಂಟ್ಸ್‌ಗಳು, ಮಾಲ್ ಮತ್ತಿತರ ಕಡೆಗಳಲ್ಲಿ ಸದರಿ ತಂಡಗಳಿಂದ ಸ್ವಯಂ ರಕ್ಷಣೆಯ ಬಗ್ಗೆ ಮಾಹಿತಿ ಹಾಗೂ ತರಬೇತಿಗಳನ್ನು ನೀಡಲಾಗಿರುತ್ತದೆ.

* ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳ, ಶಾಲಾ ಕಾಲೇಜುಗಳ ಮುಖ್ಯಸ್ಥರನ್ನು ಭೇಟಿ ಮಾಡಿ ವಿಧ್ಯಾರ್ಥಿನಿಯರಿಗೆ ಕಿರುಕುಳ, ಅತ್ಯಾಚಾರದಂತಹ ಘಟನೆಗಳ ಬಗ್ಗೆ ಜಾಗೃತಿ ಮೂಡಿಸುವ ಕುರಿತು ಆಗಾಗ ಸಭೆಗಳನ್ನು ಆಯೋಜಿಸುವಂತೆ ಸೂಚಿಸಲಾಗಿರುತ್ತದೆ ಮತ್ತು ಗ್ರಾಮ ಸಭೆಗಳು, ಸಾರ್ವಜನಿಕ ಸಭೆಗಳಲ್ಲಿಯೂ ಸಹ ಜಾಗೃತಿ ಮೂಡಿಸಲಾಗುತ್ತಿದ.

* ವಿದ್ಯಾರ್ಥಿನಿಯರು ಇರುವ ಹಾಸ್ಟಲ್‌ಗಳು ಹಾಗೂ ಮಹಿಳಾ ಪಿಜಿಗಳ ಕಡೆಗೆ ವಿಶೇಷ ಗಸ್ತು ನೇಮಿಸಿ ಮಹಿಳಾ ಸಿಬ್ಬಂದಿಯಿಂದ ಮೇಲಿಂದ ಮೇಲೆ ಭೇಟಿ ಕೊಡುವ ಕುರಿತು ಕ್ರಮ ವಹಿಸಲಾಗಿದೆ.

* ಬೆಂಗಳೂರು ನಗರದಲ್ಲಿ ಮಹಿಳೆಯರ ರಕ್ಷಣೆಗಾಗಿ ಸೇಫ್ ಸಿಟಿ ಪ್ರಾಜೆಕ್ಟ್ ಅಡಿಯಲ್ಲಿ 7500 ಸಿ.ಸಿ.ಟಿ.ವಿ ಗಳನ್ನು ಅಳವಡಿಸಲಾಗಿದೆ ಹಾಗೂ ಅವರ ನೆರವಿಗಾಗಿ 24/7 ಸಮಯ ಕಾಲ ಸ್ಪಂದಿಸಲು 'ಕಮಾಂಡ್ ಸೆಂಟರ್' ಅನ್ನು ತೆರೆಯಲಾಗಿದ್ದು, ಸದರಿ ಕಮಾಂಡ್ ಸೆಂಟರ್ ನಲ್ಲಿ ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ. ಈ ಮೂಲಕ ನಗರದ ಯಾವುದೇ ಭಾಗದಿಂದ ತೊಂದರೆಗೊಳಗಾದ ಮಹಿಳೆಯರು 112 ಸಂಖ್ಯೆಗೆ ಕರೆ ಮಾಡಿದಾಗ ತಕ್ಷಣ ನೆರವು ನೀಡಲು ಶ್ರಮಿಸಲಾಗುತ್ತಿದೆ.

* ಅಲ್ಲದೆ ಮಹಿಳೆಯರ ಮತ್ತು ಬಾಲಕಿಯರ ಸುರಕ್ಷತೆಗಾಗಿ ಈ ಕೆಳಕಂಡ ಇತರ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ.

    - ವಿವಿಧ ಸ್ಥಳಗಳಲ್ಲಿ ಒಟ್ಟು 30 ಸೇಫ್ಟಿ ಐಲ್ಯಾಂಡ್‌ಗಳನ್ನು ಗುರುತಿಸಲಾಗಿದೆ.
    - ಒಂದು ಮೊಬೈಲ್ ಕಮಾಂಡ್ ಅಂಡ್ ಕಂಟ್ರೋಲ್ ವಾಹನ ಖರೀದಿಸಲಾಗಿದ್ದು, ಇದಕ್ಕೆ ಅಗತ್ಯವಿರುವ ಫ್ಯಾಬ್ರಿಕೇಷನ್ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ.
    - ಒಟ್ಟು 400 ಬಾಡಿ ವೋರ್ನ್ ಕ್ಯಾಮೆರಾಗಳನ್ನು ಖರೀದಿಸಲಾಗಿದೆ.
    - ವಿವಿಧ ಸ್ಥಳಗಳಲ್ಲಿ 96 ವೀಕ್ಷಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಇವು ಕಾರ್ಯನಿರ್ವಹಣೆಯಲ್ಲಿರುತ್ತವೆ.

- 8 ಡ್ರೋನ್ ಕ್ಯಾಮೆರಾಗಳನ್ನು ಖರೀದಿಸಿ ಬಳಸಲಾಗುತ್ತಿದೆ.

❖ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ, ತ್ವರಿತ ನೆರವು ಸ್ಪಂದನೆಗಾಗಿ ನಿರ್ಭಯಾ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ರಾಜ್ಯದ ಪೊಲೀಸ್ ಠಾಣೆಗಳಲ್ಲಿ ಒಟ್ಟು 1050 ಮಹಿಳಾ ಹೆಲ್ಪ್ ಡೆಸ್ಕ್ (Women Help Desk) ಗಳನ್ನು ಸ್ಥಾಪಿಸಲಾಗಿರುತ್ತದೆ.

❖ ಮಹಿಳೆಯರ ಮತ್ತು ಮಕ್ಕಳ ಕಳ್ಳ ಸಾಗಣೆ ತಡೆಗಟ್ಟುವ ಸಲುವಾಗಿ ಸದರಿ ಪ್ರಕರಣಗಳನ್ನು ಪ್ರತ್ಯೇಕವಾಗಿ ನಿರ್ವಹಿಸಲು ರಾಜ್ಯದಲ್ಲಿ ಒಟ್ಟು 35 ಮಾನವ ಕಳ್ಳ ಸಾಗಣೆ ನಿಷೇಧ ಘಟಕ (Anti Human Trafficking Unit) ಗಳನ್ನು ಮಹಿಳಾ ಪೊಲೀಸ್ ಠಾಣೆಗಳಲ್ಲಿ ಸ್ಥಾಪಿಸಲಾಗಿರುತ್ತದೆ.

❖ ಸಂತ್ರಸ್ಥರ ಪರಿಹಾರ ನಿಧಿ ಅಡಿಯಲ್ಲಿ ನೊಂದ ಮಹಿಳಾ ಸಂತ್ರಸ್ಥರಿಗೆ ಸರ್ಕಾರದಿಂದ ನೀಡುವ ಸಹಾಯ ಧನವನ್ನು ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರದಿಂದ ನೀಡಲಾಗುತ್ತಿದೆ. ಅದಕ್ಕೆ ಪೊಲೀಸ್ ಇಲಾಖೆಯು ಅಗತ್ಯ ದಾಖಲೆಗಳನ್ನು ಒದಗಿಸುತ್ತದೆ.

ಸಂಖ್ಯೆ : ಹೆಚ್‌ಡಿ 39 ಎಸ್‌ಡಿಎನ್ 2024

(ಡಾ|| ಜಿ. ಪರಮೇಶ್ವರ)
ಗೃಹ ಸಚಿವರು